# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿಗೆ ಸಂಬಂಧಿಸಿದಂತೆ ವಾರ್ಡ್ ಸಮಿತಿಯ ಸಭೆಯನ್ನು ದಿನಾಂಕ: 26-07-2021 ರಂದು ಆಯೋಜಿಸಿದ್ದು, ಸದರಿ ವಾರ್ಡ್ ಸಮಿತಿ ಸಭೆಯ ನಡವಳಿಗಳು**

1. ಶ್ರೀ ನಾಗಪ್ಪ ಕಮತಿ (ನೋಡಲ್ ಅಧಿಕಾರಿ)
2. ಶ್ರೀ ಎಸ್. ರಾಜನ್ (ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು)
3. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು,
4. ಶ್ರೀಮತಿ ಶ್ರೀಲಕ್ಷ್ಮಿ, ಕಿರಿಯ ಆರೋಗ್ಯ ನಿರೀಕ್ಷಕರು,
5. ಶ್ರೀ ಜೋಶ್ವಾ, ಕರ ವಸೂಲಿಗಾರರು,
6. ಶ್ರೀ ಶ್ರೀನಿವಾಸ್, ಕಂದಾಯ ನಿರೀಕ್ಷಕರು,
7. ಶ್ರೀ ಪ್ರಮೋದ್, ಮಾರ್ಷಲ್
8. ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ,
9. ಶ್ರೀ ಮುರುಳೀಧರ್, ಸ್ಥಳೀಯರು,
10. ಶ್ರೀ ರವಿಚಂದ್ರನ್, ಸ್ಥಳೀಯರು,
11. ಶ್ರೀ ಸುರೇಶ್, ಸ್ಥಳೀಯರು,

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು, ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

**1) ಶ್ರೀ ಸುರೇಶ್, ಸ್ಥಳೀಯರು ಮಾತನಾಡುತ್ತಾ,**

- ಜಾನಕಿರಾಮ್ ಬಡಾವಣೆಯ ಅಡ್ಡರಸ್ತೆಗೆ ಕಾಂಕ್ರೀಟ್ ಅನ್ನು ಹಾಕಬೇಕು
- ಹನುಮಂತಪ್ಪ ರಸ್ತೆಯಲ್ಲಿ ಹೂಳು ತೆಗೆಯಬೇಕು
- ಕಮ್ಮನಹಳ್ಳಿ ಮುಖ್ಯರಸ್ತೆಯ ಪಾದಾಚಾರಿ ಮಾರ್ಗದಲ್ಲಿ ತರಕಾರಿ ತಳ್ಳುವ ಗಾಡಿಗಳು ಹೆಚ್ಚಾಗಿದ್ದು, ಸಾರ್ವಜನಿಕರು ಹಾಗೂ ವಾಹನ ಸವಾರರಿಗೆ ಓಡಾಡಲು ತೊಂದರೆಯಾಗುತ್ತಿದ್ದು, ಅದನ್ನು ಕೂಡಲೇ ತೆರವುಗೊಳಿಸಲು ಕೋರಿದರು.

**2) ಶ್ರೀ ರವಿಚಂದ್ರನ್, ಸ್ಥಳೀಯರು ಮಾತನಾಡುತ್ತಾ,**

- ವಾರ್ಡ್ ವ್ಯಾಪ್ತಿಯಲ್ಲಿ 18 ವರ್ಷ ಮೇಲ್ಪಟ್ಟ ವಯೋಮಾನದವರಿಗೆ ಚುನಾವಣಾ ಗುರುತಿನ ಚೀಟಿಯನ್ನು ಮಾಡಿಕೊಡಲು ಕ್ರಮ ವಹಿಸಲು ಕಂದಾಯ ಇಲಾಖೆಯ ಅಧಿಕಾರಿ ನೌಕರರಿಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿ ಬಡವರು ಹಾಗೂ ಕೂಲಿ ಕಾರ್ಮಿಕರಿಗೆ ಪಡಿತರ ಚೀಟಿಯನ್ನು ಮಾಡಿಕೊಡಲು ಕ್ರಮ ವಹಿಸಲು ಸಭೆಗೆ ತಿಳಿಸಿದರು.

3) <u>ಶ್ರೀ ಮುರುಳೀಧರ್, ಸ್ಥಳೀಯರು, ಮಾತನಾಡಿ,</u>

- ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಅಭಾವವಿದ್ದು, ಅವಶ್ಯವಿರುವ ಪ್ರದೇಶಗಳಲ್ಲಿ ಬೋರ್‌ವೆಲ್‌ಗಳನ್ನು ಕೊರೆಯಬೇಕು.
- ಐ.ಓ.ಸಿ ಫ್ಲೈ ಓವರ್ ಕೆಳಬಾಗದಲ್ಲಿ ಮಳೆಗಾಲದಲ್ಲಿ ನೀರು ನಿಂತು ಹೋಗುತ್ತಿದ್ದು, ಇದರಿಂದ ವಾಹನ ಸಂಚಾರರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಈ ಪ್ರದೇಶದಲ್ಲಿ ಹೊಸದಾಗಿ ಚರಂಡಿ ನಿರ್ಮಾಣ ಮಾಡಲು ಬೃಹತ್ ರಸ್ತೆ ಇಲಾಖೆ ರವರಿಗೆ ತಿಳಿಸಬೇಕು ಎಂದು ಸಭೆಗೆ ತಿಳಿಸಿದರು.

4) <u>ಮಾನ್ಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳು ಮಾತನಾಡಿ,</u> ಕೊನೆಯದಾಗಿ ಮಾನ್ಯ ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ವಿಷಯಗಳ ಬಗ್ಗೆ ಆಯಾ ಇಲಾಖೆಯ ಅಧಿಕಾರಿ / ನೌಕರರುಗಳು ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ,

ನೋಡೆಲ್ ಅಧಿಕಾರಿ
ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ

<u>ಪ್ರತಿಯನ್ನು</u>

1) ಕಾರ್ಯಪಾಲಕ ಅಭಿಯಂತರರು, ಸರ್ವಜ್ಞನಗರ ವಿಭಾಗ, ಬಿ.ಬಿ.ಎಂ.ಪಿ
2) ಕಾರ್ಯಪಾಲಕ ಅಭಿಯಂತರರು, ಯೋಜನೆ (ಪೂರ್ವ ವಲಯ) ಬಿ.ಬಿ.ಎಂ.ಪಿ
3) ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಪೂರ್ವ ವಲಯ) ಬಿ.ಬಿ.ಎಂ.ಪಿ
4) ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
5) ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ
6) ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು.ಬಿ.ಬಿ.ಎಂ.ಪಿ
7) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ಬಿ.ಬಿ.ಎಂ.ಪಿ
8) ತೋಟಗಾರಿಕಾ ಅಧೀಕ್ಷಕರು, (ಪೂರ್ವ ವಲಯ)
9) ಆರೋಗ್ಯ ವೈದ್ಯಾಧಿಕಾರಿಗಳು, (ಪೂರ್ವ ವಲಯ)
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣಾ ವಿಭಾಗ
11) ಸಹಾಯಕ ಕಂದಾಯ ಅಧಿಕಾರಿ. ಮಾರುತಿ ಸೇವಾ ನಗರ ಉಪವಿಭಾಗ
12) ಕಲ್ಯಾಣಾಧಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
13) ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
14) ಪೋಲಿಸ್ ಇನ್ಸ್‌ಪೆಕ್ಟರ್, ಬಾಣಸವಾಡಿ.
15) ಪೋಲಿಸ್ ಇನ್ಸ್‌ಪೆಕ್ಟರ್,(ಸಂಚಾರಿ), ಬಾಣಸವಾಡಿ.
16) ಕಛೇರಿ ಪ್ರತಿ.